ಉಪಾಧ್ಯಕ್ಷರು : ಆದ್ದರಿಂದ ಇನ್ನು ಮುಂದೆ ಯಾವ ಸದಸ್ಯರೂ ಕೂಡ ಈ ರೀತಿ ಮಾಡಬಾರದು ಅಂತ ಹೇಳಿ ಈ ಮೊಬೈಲ್ ಮಾಲೀಕರಿಗೆ ಒಂದು ನೂರು ರೂಪಾಯಿ ಫೈನ್ ಹಾಕಿದ್ದೇವೆ. ಅವರು ಅದನ್ನು ಪಾವತಿ ಮಾಡಿ ನಂತರ ತೆಗೆದುಕೊಂಡು ಹೋಗಬಹುದು. ಈಗ ಸದನವನ್ನು ನಾಳೆ ಬೆಳಿಗ್ಗೆ 10–30 ಗಂಟೆವರೆಗೆ ಮುಂದೂಡಲಾಗಿದೆ.

(ಸದನವು ಸಂಜೆ ಆರು ಗಂಟೆಗೆ ಮುಂದೂಡಲ್ಪಟ್ಟು ಪುನಃ ದಿನಾಂಕ 25ನೇ ಜುಲೈ ಮಾಹೆ 2003ರ ಶುಕ್ರವಾರದಂದು ಬೆಳಿಗ್ಗೆ 10–30 ಗಂಟೆಗೆ ಸೇರಲು ನಿಶ್ಚಯಿಸಿತು)

5) ಅನುಬಂಧ – I

ಲಿಂಗಸೂಗೂರ ತಾಲ್ಲೂಕಿನಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆ

3618(4166) ಶ್ರೀ ಅಮರೇಗೌಡ ಪಾಟೀಲ್ ಬಯ್ಯಾಪುರ (ಲಿಂಗಸಗೂರ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಯಚೂರು ಜಿಲ್ಲೆಯ ಲಿಂಗಸಗೂರ ತಾಲ್ಲೂಕಿನ ಮೊರಾರ್ಜಿ ವಸತಿ ಶಾಲೆಯ ನಿರ್ಮಾಣದ ಕಾಮಗಾರಿಯು ಯಾವ ಹಂತದಲ್ಲಿದೆ;

ಆ) ಸದರಿ ಕಟ್ಟಡದ ಕಾಮಗಾರಿಗೆ ಇಲ್ಲಿಯವರೆಗೆ ಮಾಡಿದ ವೆಚ್ಚವೆಷ್ಟು; ಹಾಗೂ ಮುಕ್ತಾಯವಾಗುವುದು ಯಾವಾಗ; ಕಟ್ಟಡದ ಕಾಮಗಾರಿಯು ಮುಕ್ತಾಯವಾಗಿದ್ದಲ್ಲಿ, ಯಾವಾಗ ಉದ್ಘಾಟನೆಯನ್ನು ಮಾಡಲಾಗುವುದು?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು) :

ಅ) ಕಟ್ಟಡದ ಕಾಮಗಾರಿಯು ಪೂರ್ಣಗೊಂಡಿರುತ್ತದೆ. ಕಟ್ಟಡಕ್ಕೆ ವಿದ್ಯುಚ್ಛಕ್ತಿ ಸಂಪರ್ಕ ಮತ್ತು ಇತರೇ ಮೂಲಭೂತ ಸೌಕರ್ಯದ ಕಾಮಗಾರಿ, ಸಂಪರ್ಕ ರಸ್ತೆ ನಿರ್ಮಾಣವಾಗಬೇಕಾಗಿದೆ.

ಆ) ರೂ. 145.66 ಲಕ್ಷಗಳು ವೆಚ್ಚವಾಗಿರುತ್ತದೆ. ಈ ಕಟ್ಟಡದ ಕಾಮಗಾರಿಯು ಅಕ್ಟೋಬರ್ 2003ರಲ್ಲಿ ಉದ್ಘಾಟನೆಯಾಗಲಿದೆ.

ಲಿಂಗಸಗೂರು ತಾಲ್ಲೂಕಿನಲ್ಲಿನ ರೇಷ್ಮೆ ಫಾರ್ಮ್‌ಗಳನ್ನು ಖಾಸಗಿಯವರಿಗೆ ವಹಿಸುವುದು

3619(4167) ಶ್ರೀ ಅಮರೇಗೌಡ ಪಾಟೀಲ್ ಬಯ್ಯಾಪುರ (ಲಿಂಗಸಗೂರು) : ಮಾನ್ಯ ರೇಷ್ಮೆ ಮತ್ತು ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದ ರೇಷ್ಮೆ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಫಾರ್ಮ್‌ಗಳನ್ನು ಖಾಸಗಿಯವರಿಗೆ ನೋಡಿಕೊಳ್ಳಲು ವಹಿಸಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಲಿಂಗಸಗೂರು ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಕೆಸರಹಟ್ಟಿ–ಕನ್ನಾಪುರ ರೇಷ್ಮೆ ಫಾರ್ಮ್‌ಗಳನ್ನು ಪುನರ್ ಸಂಘಟನೆಗಾಗಿ ಖಾಸಗಿಯವರಿಗೆ ವಹಿಸಿಕೊಡಲಾಗಿದೆಯೇ?

ಶ್ರೀ ಹೆಚ್.ಎಂ. ರೇವಣ್ಣ (ರೇಷ್ಮೆ ಮತ್ತು ಜವಳಿ ಸಚಿವರು) :

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ರಾಜ್ಯದಲ್ಲಿ ಮೀನು ಮರಿಗಳ ಉತ್ಪಾದನೆ ಹೆಚ್ಚಳ

3620(4361) ಶ್ರೀ ಆರಗ ಜ್ಞಾನೇಂದ್ರ (ತೀರ್ಥಹಳ್ಳಿ) : ಮಾನ್ಯ ಮೀನುಗಾರಿಕೆ ಹಾಗೂ ಬಂದರು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

(†ಈ ಚಿಹ್ನೆ ಮಾನ್ಯ ಸದಸ್ಯರ ಟಿಪ್ಪಣಿ ಅಥವಾ ಭಾಷಣವನ್ನೂ ಪರಿಷ್ಕರಿಸಿಲ್ಲ ಎಂದು ಸೂಚಿಸುತ್ತದೆ)